ತಂತಿ ವಿಳಾಸ: ಯೂನಿರೆಜ್
ದೂರವಾಣಿ ಸಂಖ್ಯೆ: 2419677/2419361
ಫ್ಯಾಕ್ಸ್: 0821-2419363/2419301

e-mail: registrar@uni-mysore.ac.in
www.uni-mysore.ac.in

# ಮೈಸೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್ ಭವನ, ಮೈಸೂರು

ಸಂಖ್ಯೆ:ಜಿಎಲ್13/110/2022-23

ದಿನಾಂಕ 10.10.2025

## ಸುತ್ತೋಲೆ

ವಿಷಯ: **'ಅಭಿವಿನ್ಯಾಸ ಕಾರ್ಯಕ್ರಮ'**ದಲ್ಲಿ ಭಾಗವಹಿಸುವ ಬಗ್ಗೆ
ಮಾನ್ಯ ಕುಲಪತಿಯವರ ಟಿಪ್ಪಣಿ ಸಂ. ಕುಪ/ಇತರೆ/2025-26,
ದಿನಾಂಕ 10.10.2025.

-:-

ಮೈಸೂರು ವಿಶ್ವವಿದ್ಯಾನಿಲಯದಲ್ಲಿ 2025-26ನೇ ಶೈಕ್ಷಣಿಕ ಸಾಲಿನಲ್ಲಿ ಪ್ರವೇಶಾತಿಯನ್ನು ಪಡೆದಿರುವ ಪ್ರಥಮ ವರ್ಷದ ಸ್ನಾತಕೋತ್ತರ ವಿದ್ಯಾರ್ಥಿಗಳಿಗಾಗಿ **'ಅಭಿವಿನ್ಯಾಸ ಕಾರ್ಯಕ್ರಮ'**ವನ್ನು (Orientation Program) ದಿನಾಂಕ.16.10.2025ರಂದು ಬೆಳಗ್ಗೆ 10.00 ಗಂಟೆಗೆ ಮಾನಸಗಂಗೋತ್ರಿಯ ಸೆನೆಟ್ ಭವನದಲ್ಲಿನ ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ. ಈ ಕಾರ್ಯಕ್ರಮವನ್ನು ಮೈಸೂರಿನಲ್ಲಿರುವ ಕರ್ನಾಟಕ ಪೊಲೀಸ್ ಅಕಾಡೆಮಿಯ ನಿರ್ದೇಶಕರಾದ ಶ್ರೀ. ಎಸ್.ಎಲ್. **ಚೆನ್ನಬಸವಣ್ಣ, IPS** ಅವರು ಉದ್ಘಾಟಿಸಲಿದ್ದಾರೆ ಹಾಗೂ ಮಂಗಳೂರಿನ ಖ್ಯಾತ ಕೌಶಲ್ಯಾಭಿವೃದ್ಧಿ ತರಬೇತುದಾರರಾದ **ಡಾ. ದೇವಿ ಪ್ರಭಾ ಆಳ್ವಾ** ಅವರು ಪ್ರಧಾನ ಭಾಷಣ ಮಾಡಲಿದ್ದಾರೆ. ಸದರಿ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗೌರವಾನ್ವಿತ ಕುಲಪತಿಗಳಾದ ಪ್ರೊ. ಎನ್.ಕೆ. ಲೋಕನಾಥ್ ಅವರು ವಹಿಸಲಿದ್ದಾರೆ.

ಈ ಕಾರ್ಯಕ್ರಮದಲ್ಲಿ ಎಲ್ಲಾ ಪ್ರಥಮ ವರ್ಷದ ಸ್ನಾತಕೋತ್ತರ ವಿದ್ಯಾರ್ಥಿಗಳು ಮಾತ್ರ **ಕಡ್ಡಾಯವಾಗಿ** ಭಾಗವಹಿಸುವಂತೆ ತಿಳಿಸಲು ಅಧ್ಯಯನದ ವಿಭಾಗಗಳ ಮುಖ್ಯಸ್ಥರಿಗೆ ಈ ಮೂಲಕ ಸೂಚಿಸಿದೆ. **ಈ ಕಾರ್ಯಕ್ರಮ ಮುಗಿದ ನಂತರ ತರಗತಿಗಳು ಎಂದಿನಂತೆ ಮುಂದುವರೆಯುತ್ತವೆ.**

**ವಿಶೇಷ ಸೂಚನೆ:**

* ಮೈಸೂರು ವಿಶ್ವವಿದ್ಯಾನಿಲಯದ ಆಯಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳ/ಕಾಲೇಜುಗಳ ಮುಖ್ಯಸ್ಥರು ಈ ಉದ್ದೇಶಕ್ಕಾಗಿ ಒಬ್ಬರು ಉಪನ್ಯಾಸಕರನ್ನು ನೋಡಲ್ ಅಧಿಕಾರಿಯನ್ನಾಗಿ ನೇಮಿಸಿಕೊಂಡು ಪ್ರಥಮ ವರ್ಷದ ವಿದ್ಯಾರ್ಥಿಗಳು ಈ ಕಾರ್ಯಕ್ರಮದಲ್ಲಿ ಕಡ್ಡಾಯವಾಗಿ ಭಾಗವಹಿಸುವಂತೆ ಕ್ರಮವಹಿಸುವುದು.

* ನೋಡಲ್ ಅಧಿಕಾರಿಯು ಹಾಜರಾಗುವ ವಿದ್ಯಾರ್ಥಿಗಳಿಂದ ಹಾಜರಾತಿ ಪಡೆದು ಅದರ ಪ್ರತಿಯನ್ನು ಕುಲಸಚಿವರ ಕಛೇರಿಗೆ ಅದೇ ದಿನ ದೃಢೀಕರಿಸಿ ಸಲ್ಲಿಸುವ ಜವಾಬ್ದಾರಿಯನ್ನು ನಿರ್ವಹಿಸತಕ್ಕದ್ದು.

* ಸದರಿ ಕಾರ್ಯಕ್ರಮಕ್ಕೆ ವಿಶೇಷ ಮುಖ್ಯ ಅತಿಥಿಗಳು ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ಕಾರ್ಯಕ್ರಮದಲ್ಲಿ ಶಿಸ್ತು-ಸಂಯಮದಿಂದ ಇರುವಂತೆ ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ ತರಗತಿಯಲ್ಲಿಯೇ ಮನವರಿಕೆ ಮಾಡುವುದು ಮತ್ತು ವಿಶ್ವವಿದ್ಯಾನಿಲಯದಲ್ಲಿ ಅಧ್ಯಯನಕ್ಕೆ ಲಭ್ಯವಾಗುವ ಶೈಕ್ಷಣಿಕ ಮಾಹಿತಿ ಮತ್ತು ಮೂಲಭೂತ ಸೌಕರ್ಯಗಳ ಬಗ್ಗೆ ಮಾಹಿತಿ ನೀಡಲಾಗುವುದರಿಂದ ಕಾರ್ಯಕ್ರಮಕ್ಕೆ ಕಡ್ಡಾಯವಾಗಿ ಹಾಜರಾಗುವಂತೆ ತಿಳಿಸುವುದು.

ಕುಲಸಚಿವರು

ಕುಲಸಚಿವರು
ಮೈಸೂರು ವಿಶ್ವವಿದ್ಯಾನಿಲಯ
ಮೈಸೂರು-570 005

ಗೆ,

1. ಆಡಳಿತಾಧಿಕಾರಿ, ಮಾನಸಗಂಗೋತ್ರಿ, ಮೈಸೂರು - ಸದರಿ ಕಾರ್ಯಕ್ರಮದ ಉಸ್ತುವಾರಿಯನ್ನು ವಹಿಸಿಕೊಂಡು, ಕಾರ್ಯಕ್ರಮದ ಯಶಸ್ಸಿಗೆ ಸಹಕರಿಸುವುದು.
2. ಅಧ್ಯಕ್ಷರು/ನಿರ್ದೇಶಕರು, ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳು, ಮಾನಸಗಂಗೋತ್ರಿ, ಮೈಸೂರು.
3. ವಿಶ್ವವಿದ್ಯಾನಿಲಯದ ಅಧೀನಕ್ಕೊಳಪಟ್ಟ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರುಗಳು.
4. ನಿರ್ದೇಶಕರು, ಐ.ಕ್ಯೂ.ಎ.ಸಿ, ಮಾನಸಗಂಗೋತ್ರಿ, ಮೈಸೂರು.
5. ನಿರ್ದೇಶಕರು, ಐ.ಸಿ.ಡಿ., ಗಣಕ ವಿಜ್ಞಾನ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು-**ಸದರಿ ಸುತ್ತೋಲೆಯನ್ನು ಮೈಸೂರು ವಿಶ್ವವಿದ್ಯಾನಿಲಯದ ಜಾಲತಾಣದಲ್ಲಿ ಪ್ರಕಟಿಸುವುದು.**
6. ಉಪ ಕುಲಸಚಿವರು (ಸಾಮಾನ್ಯ)/ಸಹಾಯಕ ಕುಲಸಚಿವರು (ಸಾಮಾನ್ಯ)/ಅಧೀಕ್ಷಕರು (ಸಾಮಾನ್ಯ) ಆಡಳಿತ ಶಾಖೆ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
7. ಮಾನ್ಯ ಕುಲಪತಿಯವರ/ಕುಲಸಚಿವ/ಕುಲಸಚಿವ(ಪರೀಕ್ಷಾಂಗ)/ಹಣಕಾಸು ಅಧಿಕಾರಿಗಳ ಆಪ್ತಸಹಾಯಕರು, ಮೈಸೂರು, ವಿಶ್ವವಿದ್ಯಾನಿಲಯ, ಮೈಸೂರು.
8. ಕಡತಕ್ಕೆ.